# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1535
2. ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 18-03-2021
4. ಉತ್ತರಿಸುವವರು : ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದ ರಿಂಗ್ ರಸ್ತೆಯ ಹೊಸಕೆರೆಹಳ್ಳಿ ಪಿ.ಇ.ಎಸ್ ಯುನಿವರ್ಸಿಟಿ ಜಂಕ್ಷನ್‌ನಿಂದ ನಾಯಂಡಹಳ್ಳಿಗೆ ಹೋಗುವ ರಸ್ತೆಯ ಇಕ್ಕೆಲಗಳಲ್ಲಿರುವ ಸರ್ವೀಸ್ ರಸ್ತೆಯೂ ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬೆಂಗಳೂರು ನಗರದ ರಿಂಗ್ ರಸ್ತೆಯ ಹೊಸಕೆರೆಹಳ್ಳಿ ಪಿ.ಇ.ಎಸ್ ಯುನಿವರ್ಸಿಟಿ ಜಂಕ್ಷನ್‌ನಿಂದ ನಾಯಂಡಹಳ್ಳಿಗೆ ಹೋಗುವ ಮುಖ್ಯರಸ್ತೆಯ ಪಕ್ಕದಲ್ಲಿನ ಸರ್ವೀಸ್ ರಸ್ತೆಯನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ರಸ್ತೆ ಕತ್ತರಿಸಿದ ಹಿನ್ನಲೆಯಲ್ಲಿ ಸದರಿ ಸರ್ವೀಸ್ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿದ್ದು, ಈ ಕಾರಣದಿಂದ ಸದರಿ ಸರ್ವೀಸ್ ರಸ್ತೆಯಲ್ಲಿ ವಾಹನಗಳು ಚಲಿಸದ ಕಾರಣದಿಂದ ಕೆಲವು ಸಾರ್ವಜನಿಕರು ಈ ಸರ್ವೀಸ್ ರಸ್ತೆಯಲ್ಲಿ ಅನುಪಯುಕ್ತ ವಸ್ತುಗಳನ್ನು (ಡೆಬ್ರಿಸ್) ಹಾಕುತ್ತಿದ್ದು ಮತ್ತು ಇದೇ ಸಂದರ್ಭದ ಅವಕಾಶವನ್ನು ಕೆಲವು ಖಾಸಗಿ ವ್ಯಕ್ತಿ / ಸಂಸ್ಥೆಗಳು ಉಪಯೋಗಿಸಿಕೊಂಡು ಈ ಸರ್ವೀಸ್ ರಸ್ತೆಯಲ್ಲಿ ಹೆಚ್ಚಾಗಿ ವಾಹನ ರಿಪೇರಿ ಮಾಡುವುದು, ಮರಳು ಮಾರಾಟ / ಕಟ್ಟಡ ಸಾಮಗ್ರಿ ಲಾರಿಗಳನ್ನು ತಾತ್ಕಾಲಿಕವಾಗಿ ನಿಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಪ್ರಸ್ತುತ, ಸದರಿ ಸರ್ವೀಸ್ ರಸ್ತೆಯನ್ನು ದುರಸ್ಥಿಪಡಿಸಿ ಮರು ಡಾಂಬರೀಕರಣ ಕೈಗೊಂಡಿದ್ದು, ಸೇವಾ ರಸ್ತೆಯನ್ನು ಸಾರ್ವಜನಿಕರ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿರುತ್ತದೆ ಮತ್ತು ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ / ಬಳಕೆಗೆ ಕಡಿವಾಣ ಹಾಕಲಾಗಿರುತ್ತದೆ. |

. . .2/-

| | | |
|---|---|---|
| ಆ | ಬೆಂಗಳೂರು ನಗರದ ಯಾವ ಯಾವ ಬಡಾವಣೆಗಳಲ್ಲಿರುವ ರಸ್ತೆಗಳು ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆಯಾಗುತ್ತಿವೆ; ಇಂತಹ ರಸ್ತೆಗಳ ಸಂಖ್ಯೆ ಎಷ್ಟು; ಇವುಗಳನ್ನು ತೆರವುಗೊಳಿಸಿ ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳನ್ನು ಸಾರ್ವಜನಿಕರು ತಮ್ಮ ವಾಹನ ಸಂಚಾರಕ್ಕೆ ಉಪಯೋಗಿಸುತ್ತಿದ್ದು, ಸದರಿ ರಸ್ತೆಗಳು ಯಾವುದೇ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆಯಾಗದಂತೆ ಕ್ರಮ ವಹಿಸಲಾಗುತ್ತಿದೆ. |

**ಸಂಖ್ಯೆ: ನಅಇ 74 ಎಂಎನ್‌ವೈ 2021 (ಇ)**

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ